# ತುಮಕೂರು ವಿಶ್ವವಿದ್ಯಾನಿಲಯ

**ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103**

**ದೂರವಾಣಿ : 0816–2254546 0816–2255596, 0816–2255597 ಫ್ಯಾಕ್ಸ್ : 0816–2270719**


**ಸಂಖ್ಯೆ: ತುವಿ:ಶೈವಿ:PG:2022–23/3306** **ದಿನಾಂಕ: 22.09.2022**

## ಸುತ್ತೋಲೆ

**ವಿಷಯ: ಎಲ್ಲಾ ಸ್ನಾತಕೋತ್ತರ ವಿಭಾಗಗಳ ವಿದ್ಯಾರ್ಥಿಗಳ ಪ್ರವೇಶ ಶುಲ್ಕ ಪಾವತಿ ಕುರಿತು.**

**ಉಲ್ಲೇಖ :** 1) ವಿ.ವಿ. ಸುತ್ತೋಲೆ ಸಂಖ್ಯೆ:ತುವಿ:ಶೈವಿ:ಪಿ.ಜಿ.:2021–22/529 ದಿನಾಂಕ:23.05.2022
2) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 20.09.2022 (ಕಂಡಿಕೆ:61 ಪುಟ ಸಂಖ್ಯೆ:20)

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021–22ನೇ ಶೈಕ್ಷಣಿಕ ಸಾಲಿನ ಪ್ರವೇಶ ಶುಲ್ಕ ಕುರಿತು ಸ್ನಾತಕೋತ್ತರ ವಿಭಾಗಗಳಿಗೆ ದಾಖಲಾಗಿರುವ ವಿದ್ಯಾರ್ಥಿಗಳು, 2021–22ನೇ ಶೈಕ್ಷಣಿಕ ಸಾಲಿನ ಪ್ರವೇಶ ಶುಲ್ಕವನ್ನು ಪೂರ್ಣ ಪ್ರಮಾಣದಲ್ಲಿ ಪಾವತಿಸಿರುವುದಿಲ್ಲ. ಈ ಕುರಿತು 2021–22ನೇ ಶೈಕ್ಷಣಿಕ ಸಾಲಿನ ಪ್ರವೇಶ ಶುಲ್ಕವನ್ನು ಪೂರ್ಣ ಪ್ರಮಾಣದಲ್ಲಿ ಪಾವತಿಸದರಿರುವ ವಿದ್ಯಾರ್ಥಿಗಳು **ಒಂದು ತಿಂಗಳ ಅವಧಿಯೊಳಗಡೆ** ಪ್ರವೇಶ ಶುಲ್ಕವನ್ನು ಪಾವತಿಸುವಂತೆ ಉಲ್ಲೇಖ (1)ರಲ್ಲಿ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ. ಆದರೆ, ಇದುವರೆವಿಗೂ ಈ ಕುರಿತು ಯಾವುದೇ ಮಾಹಿತಿಯು ವಿಭಾಗಕ್ಕೆ ಸ್ವೀಕೃತಿಯಾಗಿರುವುದಿಲ್ಲ. ಆದ್ದರಿಂದ ಸದರಿ ಅಂಶವನ್ನು ವಿಶ್ವವಿದ್ಯಾನಿಲಯವು ಗಂಭೀರವಾಗಿ ಪರಿಗಣಿಸಿದ್ದು,

ಈ ಪತ್ರ ತಲುಪಿದ ಕೂಡಲೇ 2021–22ನೇ ಶೈಕ್ಷಣಿಕ ಸಾಲಿನ ಪ್ರವೇಶ ಶುಲ್ಕವನ್ನು ಪೂರ್ಣ ಪ್ರಮಾಣದಲ್ಲಿ ಪಾವತಿಸದರಿರುವ ವಿದ್ಯಾರ್ಥಿಗಳಿಂದ ಪಾವತಿಸಿಕೊಂಡು ಸದರಿ ಮಾಹಿತಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ಈ ಮೂಲಕ ತಿಳಿಸಿದೆ. **ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸದಿರುವ ವಿದ್ಯಾರ್ಥಿಗಳಿಗೆ ಮುಂಬರುವ ಪರೀಕ್ಷೆಗಳ ಪ್ರವೇಶ ಪತ್ರ (Hall ticket) ವನ್ನು ನೀಡಬಾರದೆಂದು** ಈ ಮೂಲಕ ತಿಳಿಸಿದೆ.

**ಆದೇಶದ ಮೇರೆಗೆ**

Mangalahom...

**ಉಪಕುಲಸಚಿವರು**

ಉಪಕುಲ ಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾಲಯ
ತುಮಕೂರು

| ಕರಡು ಪತ್ರವು ಮಾನ್ಯ ಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ. |
|---|

**ಗೆ,**

1. **ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**
2. **ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**
3. **ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ – 572 139.**
4. **ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತಿಪಟೂರು – 572 201.**

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು– ಈ ಮಾಹಿತಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
3. ಕಚೇರಿ ಪ್ರತಿ.